## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರಕಛೇರಿ ವಾರ್ಡ್ ಸಂಖ್ಯೆ 138 ಬಲವಾಧಿ ಪಾಳ್ಯ ಬೆಂಗಳೂರು

---

ಸಂಖ್ಯೆ: W-138/Committee/Proceding -25/2021-22 dt. 10-11-2021

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 138 ಸಭೆಯ ನಡವಳಿಗಳು

**10-11-2021** ರಂದು ಬೆಳಿಗ್ಗೆ **12.30** ಘಂಟೆಗೆ ವಾರ್ಡ್ ಸಂಖ್ಯೆ: **138** ಭಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: **10-09-2020**ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿಯ ಪ್ರತಿ ವಾರ್ಡ್‌ಗೆ ವಾರ್ಡ್ ಹಂತದ ಸಮಿತಿ ರಚಿಸಿದ್ದು. ಹೊಸದಾಗಿ ದಿನಾಂಕ **22-09-2021** ರಂದು ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ)ರವರನ್ನು ನೋಡೆಲ್ ಅಧಿಕಾರಿಯಾಗಿ ನೇಮಕಾತಿ ಮಾಡಿದ್ದು, ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ.ಮೊಹಮದ್ ಜಾಫರ್ ಸಾಧಿಕ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭಾ ಸದಸ್ಯರು ವಾರ್ಡ್ ವ್ಯಾಪ್ತಿಯ ಪ್ರದೇಶಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಸ್ತೆ ಗುಂಡಿಗಳಿದ್ದು ತಾವು ಹಿಂದಿನ ಸಭೆಯಲ್ಲಿ ನಿರ್ಣಯಿಸಿದಂತೆ ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ ಸಭೆಯುಲ್ಲಿ ಪ್ರಸ್ಥಾಪಿಸಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಮಳೆಗಾಲವಿರುವುದರಿಂದ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚುವುದು ಸಾಧ್ಯವಿರುವುದಿಲ್ಲ, ಹಾಗೂ 2021-22ನೇ ಸಾಲಿನ ಕಾರ್ಯಕ್ರಮಗಳ ಪಟ್ಟಿಯಲ್ಲಿ ವಾರ್ಡ್‌ಗಳಿಗೆ 20.00 ಲಕ್ಷವನ್ನು ಮೀಸಲಿರಿಸಿದ್ದು ಮುಂದಿನ ದಿನಗಳಲ್ಲಿ ಮಳೆ ಕಡಿಮೆಯಾದ ಮೇಲೆ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

---3

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -138ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು, ಹಿಂದಿನ ಹದಿನೈದು ದಿನಗಳಿಂದ ಹಬ್ಬ-ಹರಿದಿನಗಳಿಂದ ಹಾಗೂ ಸಾರ್ವಜನಿಕರ ರಜಾ ದಿನಗಳು ಹೆಚ್ಚವುದರಿಂದ ಕಸ ವಿಲೇವಾರಿ ಘಟಕಗಳಲ್ಲಿ ಮಿಶ್ರಕಸ ವಿಲೇವಾರಿಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರುಗಳು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬ್ಲಾಕ್ ಪಾಯಿಂಟ್ ಹೆಚ್ಚಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್-138 ರಲ್ಲಿ ಹಿಂದಿನ ಹದಿನೈದು ದಿನಗಳಿಂದ ಹಬ್ಬ-ಹರಿದಿನಗಳಿಂದ ಹಾಗೂ ಸಾರ್ವಜನಿಕರ ರಜಾ ದಿನಗಳು ಹೆಚ್ಚಾಗಿರುವುದರಿಂದ ಹಾಗೂ ಕಾರ್ಮಿಕರ ಗೈರು ಹಾಜರಾತಿಯಿಂದ ಬ್ಲಾಕ್ ಪಾಯಿಂಟ್ ಹೆಚ್ಚಾಗಿದ್ದು ಸರಿಪಡಿಸುತ್ತಿರುವ ಬಗ್ಗೆ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ವಾರ್ಡ್ ವ್ಯಾಪ್ತಿಯಲ್ಲಿ ಅನಾಧಿಕೃತವಾಗಿ ಫ್ಲೆಕ್ಸ್ ತೆರವುಗೊಳಿಸಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಸಂಬಂಧಿಸಿದ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಫ್ಲೆಕ್ಸ್ ಬೋರ್ಡ್‌ಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ವಾರ್ಡ್ ವ್ಯಾಪ್ತಿಯಲ್ಲಿ ಕರುಡು ಚುನಾವಣೆ ಗುರುತಿನ ಚೀಟಿ ಪಟ್ಟಿಯನ್ನು ಮಾನ್ಯ ಮುಖ್ಯ ಆಯುಕ್ತರು ಆದೇಶಿಸಿರುವಂತೆ ಪ್ರತಿಯನ್ನು ಕಛೇರಿಯ ನೋಟಿಸ್ ಬೋರ್ಡ್‌ನಲ್ಲಿ ಲಗತ್ತಿಸಿ ತಿದ್ದುಪಡಿ ಮಾಡಲು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

---4

ಸಂಬಂಧಿಸಿದ ಕಂದಾಯ ಅಧಿಕಾರಿಗಳು ಸಭೆಯಲ್ಲಿ ಮತದಾರರ ಗುರ್ತಿನ ಚೀಟಿ ಕರಡು ಪ್ರತಿಯನ್ನು ನೋಟಿಸ್ ಬೋರ್ಡ್‌ನಲ್ಲಿ ಹಾಕಿ ತಿದ್ದುಪಡಿ ಮಾಡಲು ಹಾಗೂ ಹೊಸದಾಗಿ ಸೇರಿಸಲು ಸಾರ್ವಜನಿಕರಿಗೆ ತಿಳಿಸಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದ್ದರು

ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 ಇತ್ತೀಚೆಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ತೆಗೆದು ಕೊಳ್ಳಲು ಅಧಿಕ ಜನರಿಗೆ ಮನಹೊಲಿಸಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು..

ಮಾನ್ಯ ಸದಸ್ಯರು ವಾರ್ಡ್-138ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು ರಾತ್ರಿಯ ಸಮಯದಲ್ಲಿ ಸ್ವಿಚ್‌ಗಳು ಹಾಗೂ ಲೈಟ್‌ಗಳು ಹಾಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಾಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು

----5

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿ ನಿರ್ದೇಶಕರು (ನಗರ ಯೋಜನೆ-ದಕ್ಷಿಣ) ದೂ.ಸಂಖ್ಯೆ 8792319950 | ಅಧ್ಯಕ್ಷರು | [signature] |
| 2 | ಶ್ರೀ ಗಿರಿಧರ್. ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ. ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್, ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | H. Litt |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | H. Litt |
| 6 | ಶ್ರೀ ಮೊಹಮದ್ ಸಾಧೀಕ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | [signature] |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | [signature] |
| 8 | ಶ್ರೀ ಶಿವಯ್ಯ (ಆರ್.ಐ) 9480685303 ಕಂದಾಯ ಪರಿವೀಕ್ಷಕರು | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | H. Litt |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು . (ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | [signature] |

[signature]

ಕಾರ್ಯದರ್ಶಿಗಳು

ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138

ವಾರ್ಡ್ ಹಂತದ ಸಮಿತಿ

[signature]

ಅಧ್ಯಕ್ಷರು

ಹಾಗೂ ನೋಡಲ್ ಅಧಿಕಾರಿ

ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138